ಪ್ರಜಾವಾಣಿ
ಕರ್ನಾಟಕದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# ಹುಬ್ಬಳ್ಳಿ–ಅಂಕೋಲಾ ರೈಲಿಗೆ 'ಹಸಿರು' ನಿಶಾನೆ

ನವದೆಹಲಿ(ಪಿಟಿಐ): ಹುಬ್ಬಳ್ಳಿ ಹಾಗೂ ಅಂಕೋಲಾ ನಡುವಣ ರೈಲು ಮಾರ್ಗ ನಿರ್ಮಾಣಕ್ಕೆ ಇದ್ದ ತೊಡಕು ನಿವಾರಣೆಯಾಗಿದೆ. ಮಾರ್ಗ ನಿರ್ಮಾಣಕ್ಕೆ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಸಮ್ಮತಿ ನೀಡಿದೆ.

ಈ ರೈಲು ಮಾರ್ಗವು ಅತ್ಯಂತ ಸೂಕ್ಷ್ಮ ಪರಿಸರ ವ್ಯವಸ್ಥೆಯನ್ನು ಹೊಂದಿರುವ ಪಶ್ಚಿಮ ಘಟ್ಟಗಳ ನಡುವೆ ಹಾದು ಹೋಗಲಿದೆ. ಈಗ ಯೋಜನೆ ಅನುಷ್ಠಾನಕ್ಕೆ ರೈಲ್ವೆ ಇಲಾಖೆಯು ರಾಜ್ಯ ಸರ್ಕಾರವನ್ನು ಸಂಪರ್ಕಿಸಬಹುದಾಗಿದೆ.

ಸುಪ್ರೀಂಕೋರ್ಟ್ ನೇಮಿಸಿದ್ದ ಕೇಂದ್ರ ಉನ್ನತಾಧಿಕಾರ ಸಮಿತಿಯು (ಸಿಇಸಿ) 168 ಕಿ.ಮೀ ಉದ್ದದ ಈ ರೈಲು ಮಾರ್ಗ ನಿರ್ಮಾಣಕ್ಕೆ ಅನುಮೋದನೆ ನೀಡಲು ಕಳೆದ ವರ್ಷ ನಿರಾಕರಿಸಿತ್ತು. ಈ ಮಾರ್ಗ ನಿರ್ಮಾಣದಿಂದ ಪಶ್ಚಿಮ ಘಟ್ಟಗಳ ಅರಣ್ಯ, ವನ್ಯಜೀವಿಗಳು ಮತ್ತು ಜೀವ ವೈವಿಧ್ಯದ ಮೇಲೆ ಭಾರಿ ಪರಿಣಾಮ ಉಂಟಾಗಲಿದೆ. ಸರಿಪಡಿಸಲಾಗದಷ್ಟು ಹಾನಿ ಆಗಲಿದೆ ಎಂದು ಸಿಇಸಿ ಹೇಳಿತ್ತು. ಹಾಗಾಗಿ ಹಸಿರು ನ್ಯಾಯಮಂಡಳಿಯ ಈಗಿನ ತೀರ್ಪು ಮಹತ್ವಪೂರ್ಣವಾಗಿದೆ.

1998ರಲ್ಲಿ ಈ ರೈಲು ಮಾರ್ಗದ ಯೋಜನೆ ಸಿದ್ಧವಾಗಿತ್ತು. ಬಳ್ಳಾರಿ ಮತ್ತು ಹೊಸಪೇಟೆಯ ಕಬ್ಬಿಣದ ಅದಿರು ಗಣಿಗಳಿಂದ ಅದಿರು ಸಾಗಿಸುವುದಕ್ಕಾಗಿ ಈ ಯೋಜನೆ ಸಿದ್ಧಪಡಿಸಲಾಗಿತ್ತು.




ಅರಣ್ಯ ಭೂಮಿಯನ್ನು ರೈಲು ಮಾರ್ಗ ನಿರ್ಮಾಣದಂತಹ ಅರಣ್ಯೇತರ ಚಟುವಟಿಕೆಗಳಿಗೆ ಬಳಸಬಾರದು ಎಂಬುದು ಈ ವಿವಾದಕ್ಕೆ ಕಾರಣ. ಅರಣ್ಯ ಭೂಮಿಯನ್ನು ರೈಲು ಮಾರ್ಗ ನಿರ್ಮಾಣದ ಅರಣ್ಯೇತರ ಚಟುವಟಿಕೆಗೆ ಬಳಸಲು ಅರ್ಜಿ ಹಾಕುವ ಹಕ್ಕು ರೈಲ್ವೆ ಇಲಾಖೆಗೆ ಇದೆ. ರೈಲ್ವೆಯು ರಾಜ್ಯ ಸರ್ಕಾರಕ್ಕೆ ಅರ್ಜಿ ಸಲ್ಲಿಸಬೇಕು. ರಾಜ್ಯ ಸರ್ಕಾರವು ಅರ್ಜಿಯನ್ನು ಕಾನೂನು ಪ್ರಕಾರ ವಿಲೇವಾರಿ ಮಾಡಬೇಕು ಎಂದು ಹಸಿರು ನ್ಯಾಯಮಂಡಳಿ ಹೇಳಿದೆ.

ಅರಣ್ಯ (ಸಂರಕ್ಷಣೆ) ಕಾಯ್ದೆ 1980ರ ಸೆಕ್ಷನ್ 2ರ ಪ್ರಕಾರ, ರಾಜ್ಯ ಸರ್ಕಾರ ಭೂಪರಿವರ್ತನೆ ಆದೇಶ ಹೊರಡಿಸಬಹುದು. ಆದರೆ ಅದಕ್ಕೆ ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆಯ ಅನುಮತಿ ಪಡೆದುಕೊಳ್ಳಬೇಕು. ಭೂ ಪರಿವರ್ತನೆಗೆ ಅರ್ಜಿ ಹಾಕುವ ರೈಲ್ವೆ ಇಲಾಖೆಯ ಹಕ್ಕಿನ ಬಗ್ಗೆ ಸಿಇಸಿ ಏನನ್ನೂ ಹೇಳಿಲ್ಲ. ಅನುಮತಿ ನಿರಾಕರಿಸುವ ತನ್ನ ನಿಲುವನ್ನು ಮಾತ್ರ ಸಿಇಸಿ ಸ್ಪಷ್ಟಪಡಿಸಿದೆ ಎಂದು ಹಸಿರು ನ್ಯಾಯಮಂಡಳಿ ಅಧ್ಯಕ್ಷ ಸ್ವತಂತ್ರ ಕುಮಾರ್ ನೇತೃತ್ವದ ಪೀಠ ಹೇಳಿದೆ.

ಅರಣ್ಯ ಭೂಮಿಯನ್ನು ರೈಲು ಮಾರ್ಗಕ್ಕಾಗಿ ಬಳಸುವುದನ್ನು ಪ್ರಶ್ನಿಸುವುದು ಈ ಹಂತದಲ್ಲಿ ಸಕಾಲಿಕವಲ್ಲ. ಏಕೆಂದರೆ ಪರಿಸರ ಮತ್ತು ಅರಣ್ಯ ಸಚಿವಾಲಯವಾಗಲಿ ಅಥವಾ ರಾಜ್ಯ ಸರ್ಕಾರವಾಗಲಿ ಈ ಬಗ್ಗೆ ಯಾವುದೇ ಅಂತಿಮ ನಿರ್ಧಾರ ಕೈಗೊಂಡಿಲ್ಲ ಎಂದು ಪರಿಸರ ಸಚಿವಾ ಲಯದ ಪರವಾಗಿ ಹಾಜರಾಗಿದ್ದ ವಕೀಲ ಬಾಲೇಂದು ಶೇಖರ್ ವಾದಿಸಿದರು.

ರಾಜ್ಯ ಸರ್ಕಾರ ತ್ವರಿತವಾಗಿ ತನ್ನ ಅರ್ಜಿಯನ್ನು ಪರಿಸರ ಸಚಿವಾಲಯಕ್ಕೆ ಸಲ್ಲಿಸಿ ಅನುಮತಿ ಪಡೆದುಕೊಳ್ಳಬೇಕು ಎಂದು ನ್ಯಾಯಮಂಡಳಿ ಹೇಳಿದೆ.

ಅರಣ್ಯ ಭೂಮಿಯನ್ನು ಅರಣ್ಯೇತರ ಚಟುವಟಿಕೆಗೆ ಪರಿವರ್ತನೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದರೆ ಅದರ ವಿರುದ್ಧ ಮೇಲ್ಮನವಿ ಸಲ್ಲಿಸುವುದಕ್ಕೆ ಅವಕಾಶ ಇದೆ. ಆದರೆ ಮೇಲ್ಮನವಿ ಸಲ್ಲಿಸುವಾಗ ಈಗಿನ ಆದೇಶದ ಕಡತಗಳನ್ನು ಅದರೊಂದಿಗೆ ಸೇರಿಸಿ ಸಲ್ಲಿಸಬೇಕು ಎಂದು ನ್ಯಾಯಮಂಡಳಿ ಸ್ಪಷ್ಟಪಡಿಸಿದೆ.

ಈ ಯೋಜನೆಗೆ ಸಂಬಂಧಿಸಿದ ಎಲ್ಲ ಅರ್ಜಿಗಳು ಮತ್ತು ಸಿಇಸಿಯ ಅಭಿಪ್ರಾಯಗಳನ್ನು ಕಳೆದ ವರ್ಷ ಅಕ್ಟೊಬರ್ 5ರಂದು ಹಸಿರು ನ್ಯಾಯಮಂಡಳಿಗೆ ಸುಪ್ರೀಂ ಕೋರ್ಟ್ ವರ್ಗಾಯಿಸಿತ್ತು.

## ರೈಲು ಮಾರ್ಗ ವಿವಾದ ಏನು?

ಹುಬ್ಬಳ್ಳಿ- ಅಂಕೋಲಾ ರೈಲು ಮಾರ್ಗ ವಿರೋಧಿಸಿ 2006ರಲ್ಲಿ ಪರಿಸರ ಸಂರಕ್ಷಣಾ ಕೇಂದ್ರ ಮತ್ತು ವೈಲ್ಡರ್‌ನೆಸ್ ಕ್ಲಬ್ ಎಂಬ ರಾಜ್ಯದ ಎರಡು ಎನ್‌ಜಿಒಗಳು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದವು. ಆನಂತರ ಯೋಜನೆಗೆ ಸುಪ್ರೀಂ ಕೋರ್ಟ್ ತಡೆ ನೀಡಿತ್ತು.

ಅರಣ್ಯ ಭೂಮಿಯನ್ನು ಅರಣ್ಯೇತರ ಚಟುವಟಿಕೆಗಳಿಗೆ ಬಳಸಬಾರದು ಎಂಬುದು ಯೋಜನೆಗೆ ಇರುವ ಪ್ರಮುಖ ಆಕ್ಷೇಪವಾಗಿದೆ.

ಪ್ರತಿಕ್ರಿಯೆಗಳು 4